ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಪಡಿತರ ವಿತರಣೆಯ ಬಗ್ಗೆ

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು):-

531 (748) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಮಾಹೆಯಾನ ಒಟ್ಟು ಎಷ್ಟು ಟನ್ ಪಡಿತರವನ್ನು ವಿತರಿಸಲಾಗುತ್ತಿದೆ ; ಇದಕ್ಕೆ ಎಷ್ಟು ವೆಚ್ಚವಾಗುತ್ತಿದೆ ; ಇದರಲ್ಲಿ ಯಾವ ಯಾವ ಆಹಾರ ಪದಾರ್ಥಗಳು ಒಳಗೊಂಡಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಎ.ಪಿ.ಎಲ್, ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳಿಗೆ ಕ್ರಮವಾಗಿ ಎಷ್ಟು ಪಡಿತರವನ್ನು ವಿತರಿಸಲಾಗುತ್ತಿದೆ;

(ಇ) ಪಡಿತರ ಆಹಾರ ಪದಾರ್ಥಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮಗಳನ್ನು ಜರುಗಿಸಲಾಗಿದೆ; ಹಾಗೂ ಎಷ್ಟು ಪ್ರಕರಣಗಳಲ್ಲಿ ನ್ಯಾಯಬೆಲೆ ಅಂಗಡಿ ಅಥವಾ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)